# ಎರಡನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ
# ಬೆಂಗಳೂರು ಗ್ರಾಮಾಂತರ ಜಿಲ್ಲೆ, ಬೆಂಗಳೂರು

ಸ್ಪೆಷಲ್ ಕೇಸ್ ನಂಃ 248/2020

(ಪ್ರಾಸಾ-2 ಚಾಸಾ-2 )
ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು
ದಿಃ08.04.2022.

| | | |
|---|---|---|
| ಸಾಕ್ಷಿದಾರರ ಹೆಸರು | - | ನಾಗರಾಜ, |
| ತಂದೆಯ/ಗಂಡನ ಹೆಸರು | - | ಮುನಿಯಲ್ಲಪ್ಪ, |
| ವಯಸ್ಸು | - | 42 ವರ್ಷ, |
| ಉದ್ಯೋಗ | - | ವ್ಯವಸಾಯ, |
| ವಾಸ | - | ಬಿಸುವನಹಳ್ಳಿ, ವೀರಾಪುರ, ದೊಡ್ಡಬಳ್ಳಾಪುರ ತಾಃ |

**ಮುಖ್ಯ ವಿಚಾರಣೆಃ ಮಾನ್ಯ ವಿಶೇಷ ಸರ್ಕಾರಿ ಅಭಿಯೋಕರವರಿಂದಃ**

ಚಾಸಾ-1 ನನ್ನ ಪತ್ನಿ. ನಾವು ಪರಿಶಿಷ್ಟ ಜಾತಿಯ ಆದಿ ಕರ್ನಾಟಕ ಜಾತಿಗೆ ಸೇರಿದವರು. ಚಾಸಾ-3 ರಿಂದ 7 ರವರ ಪರಿಚಯ ಇದೆ. ಆರೋಪಿಗಳು ಗೊತ್ತು. ಅವರು ಒಕ್ಕಲಿಗ ಜಾತಿಗೆ ಸೇರಿದವರು. ನ್ಯಾಯಾಲಯದ ಮುಂದೆ ಹಾಜರಿರುವ ಆರೋಪಿಗಳನ್ನು ಸಾಕ್ಷಿ ನೋಡಿ ಗುರುತಿಸಿರುತ್ತಾರೆ. ಆರೋಪಿಗಳು ನಮ್ಮ ಊರಿನವರು. ನಮಗೆ ಬಿಸುವನಹಳ್ಳಿಯ ಸರ್ವೆ ನಂಬರ್ 2/2 ರಲ್ಲಿ 1 ಎಕರೆ 11 ಗುಂಟೆ ಜಮೀನು ಇದೆ. ಸದರಿ ಆಸ್ತಿ ನಮ್ಮ ತಾತನಿಂದ ಬಂದಿರುತ್ತದೆ. ಜಮೀನಿನಲ್ಲಿ ಮನೆ ಮಾಡಿಕೊಂಡು ವಾಸವಾಗಿದ್ದೇವೆ. ಆರೋಪಿತರು ಊರಿನಲ್ಲಿ ಬಡ್ಡಿ ವ್ಯವಹಾರ ಮಾಡುತ್ತಾರೆ. ಆರೋಪಿತರ ಬಳಿ ನಾವು ಒಂದು ಲಕ್ಷ ಹಣವನ್ನು ಸಾಲವಾಗಿ ಪ್ರತಿ ತಿಂಗಳು 5 ಪ್ರತಿಶತ ಬಡ್ಡಿಯಂತೆ ಪಡೆದಿದ್ದೆನು. ಸಾಲ ಪಡೆದಾಗಿನಿಂದ 2012 ನೇ ಇಸವಿಯಿಂದ 5 ಸಾವಿರ ಬಡ್ಡಿ ಕಟ್ಟುತ್ತಾ ಬಂದಿದ್ದು 2015 ರಲ್ಲಿ 50 ಸಾವಿರ ಹಣವನ್ನು ವಾಪಸ್ಸು ಮಾಡಿದ್ದೆ.

ಈ ಹಂತದಲ್ಲಿ ಸರ್ಕಾರಿ ಅಭಿಯೋಜಕರು ಮುಂದುವರಿದ ಮುಖ್ಯ ವಿಚಾರಣೆಗಾಗಿ ಕಾಲಾವಕೋಶ ಕೋರಿದ್ದು ವಿನಂತಿಯ ಮೇರೆಗೆ ಮುಂದುವರಿದ ಮುಖ್ಯ ವಿಚಾರಣೆಗಾಗಿ ಮುಂದೂಡಲಾಯಿತು.

(ಮೇಲ್ಕಂಡ ಸಾಕ್ಷ್ಯವನ್ನು ತೆರೆದ ನ್ಯಾಯಾಲಯದಲ್ಲಿ ತೆಗೆದುಕೊಂಡು ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಿಸಿದೆ)

ಓ ಹೇ ಸಾ ಸ ಸಹಿ ಮಾಡಿದ್ದಾರೆ,

(ಮೋಹನ ಬಾಡಗಂಡಿ)
ಎರಡನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ
ಬೆಂಗಳೂರು ಗ್ರಾಮಾಂತರ ಜಿಲ್ಲೆ, ಬೆಂಗಳೂರು